# PROJECT WORK

"ಜಾಗತೀಕರಣದ ಸಂದರ್ಭದಲ್ಲಿ ನಮ್ಮೂರ ಜಾತ್ರೆಗಳು"

ಹೆಸರು : ನಾಗರಾಜ. ಈ. ತಿಳಿಗಾಳ

ವಿಷಯ : ಕನ್ನಡ

ತರಗತಿ : B.A II sem

ನೋಂದಣಿ ಸಂಖ್ಯೆ : U02BE23A0027

ಕಾಲೇಜು ಹೆಸರು : ಶ್ರೀ ನಾಲಂದ ಚಂದ್ರಪ್ಪ ಡಾ. ಬಿ. ಆರ್ ಅಂಬೇಡ್ಕರ್ ಸ್ಮಾರಕ ಬಿ.ಕೆ.ಶಿ Edu. ಸೊಸೈಟಿಯ ಕಲಾ ಮತ್ತು ವಾಣಿಜ್ಯ ಕಾಲೇಜು ಗಂಗಾಧರ ನಗರ. ಹುಬ್ಬಳ್ಳಿ.

# ಸಿರ್ಸಿ ಜಾತ್ರೆ



ದೇವರ ಜಾತ್ರೆಗಳು, ಗ್ರಾಮಗಳ ಒಂದು ಪ್ರಮುಖ ಪರಂಪರೆ. ಸಾಮಾನ್ಯವಾಗಿ ಒಂದು ಸಾರ್ವಜನಿಕ ಉದ್ದೇಶಕ್ಕಾಗಿ ಒಂದು ಕೂಡುವಿಕೆಯನ್ನು ಜಾತ್ರೆ ಎಂದು ಕರೆಯಲಾಗುತ್ತದೆ.

ಪ್ರತಿ ಎರಡು ವರ್ಷಗಳಿಗೊಮ್ಮೆ ಸರ್ವತ್ರ ಸುಭಿಕ್ಷಾರ್ಥವಾಗಿ ಧಾರ್ಮಿಕರ ಪರಂಪರೆಯಂತೆ ಪೂಜೆ- ಉತ್ಸವಗಳಿಂದೊಡಗೂಡಿದ "ಶ್ರೀ ಮಾರಿಕಾಂಬಾ" ಜಾತ್ರೆಯನ್ನು ಅತಿ ವಿಜೃಂಭಣೆಯಿಂದ ನಡೆಸಲಾಗುತ್ತದೆ. ಇದು ಭಾರತದಲ್ಲಿಯೇ ಅತಿದೊಡ್ಡ ಜಾತ್ರೆ. ಈ ಜಾತ್ರೆಗೆ ದೇಶದ ಮೂಲೆ ಮೂಲೆಗಳಿಂದ ಭಕ್ತಸಾಗರ ಹರಿದು ಬರುತ್ತದೆ. ಅನೇಕಾನೇಕ ಮನರಂಜನಾ ಕಾರ್ಯಕ್ರಮಗಳು ನಾನಾ ಕಲೆಗಳ ಪ್ರದರ್ಶನಗಳು. ರಸ್ತೆಯ ಬದಿಗಳಲ್ಲಿ ಬಗೆ ಬಗೆಯ ಅಂಗಡಿ ಮುಂಗಟ್ಟುಗಳು, ಝಗಝಗಿಸುವ ದೀಪದ ಅಲಂಕಾರಗಳು ಜಾತ್ರೆಯ ಸೊಬಗನ್ನು ಹೆಚ್ಚಿಸುತ್ತವೆ.

ವಿಧಿ ವಿಧಾನಗಳು :

ಶಿರಸಿಯ ಜಾತ್ರೆ 9 ದಿನಗಳ ಕಾಲ ನಡೆಯುವ ಅದ್ದೂರಿ ಜಾತ್ರೆ ಇಲ್ಲಿ ಜಾತ್ರೆ ಪ್ರಾರಂಭ ಆಗುವ ಎರಡು ತಿಂಗಳು ಮೊದಲಿನಿಂದಲೇ ಜಾತ್ರೆಯ ವಿಧಿ ವಿಧಾನಗಳು ಪ್ರಾರಂಭವಾಗುತ್ತವೆ. ಜಾತ್ರೆಯ ಮುಹೂರ್ತ ನಿರ್ಧರಿಸಲು ಫಾಲ್ಗುಣ ಮಾಸದ ಒಂದು ದಿನ ವಿಶೇಷ ಸಭೆ ಕರೆಯಲಾಗುತ್ತದೆ. ಈ ಸಭೆಯಲ್ಲಿ ಊರಿನ ಗಣ್ಯರು, ಸಾರ್ವಜನಿಕರು, ಬಾಬುದಾರರು, ಧರ್ಮದರ್ಶಿ-ಗಳು ಭಾಗವಹಿಸಿರುತ್ತಾರೆ. ಜಾತ್ರೆಯ ದಿನ ನಿಗದಿಯಾದ ನಂತರ ಸಂಪ್ರದಾಯದಂತೆ ಜಾತ್ರೆಯ ಪೂರ್ವದ ಮೂರು ಮಂಗಳವಾರ ಎರಡು ಶುಕ್ರವಾರ ದಿನಗಳಂದು ಐದು ಹೊರಬೀಡುಗಳು ಆಗುತ್ತವೆ.

ಹೊರಬೀಡು ಎಂದರೆ ರಾತ್ರಿ ಗಡಿ ಗದ್ದುಗೆಗಳಿಗೆ ಹೋಗಿ ಜನಸ್ವಾತೆಯ ಸೇವೆಗೆ ಉಪಯೋಗಿಸುವ ಆಯುಧಗಳು ವಾದ್ಯಗಳು, ಕಹಳೆ, ಹಲಗೆ, ದೀವಟಿಗೆ ಮೊದಲಾದವುಗಳನ್ನು ದೇವಿಯ ಎದುರಿಟ್ಟು ಪೂಜಿಸಿ ಪ್ರತಿಷ್ಠಿಸುವುದು. ಐದು ಹೊರಬೀಡಿನಲ್ಲಿ ಮೂರು ಮಂಗಳವಾರಗಳಂದು ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಕುಳಿಸಿಕೊಂಡು ಮೆರವಣಿಗೆಯೊಂದಿಗೆ ಪೂರ್ವ ದಿಕ್ಕಿನ ಕಡೆಗೆ ಹೋದರೆ, ಉಳಿದೆರಡು ಶುಕ್ರವಾರ ಪಲ್ಲಕ್ಕಿಯು ಉತ್ತರ ದಿಕ್ಕಿನ ಗಡಿಯ ನಿರ್ದಿಷ್ಟ ಗದ್ದುಗೆಗೆ ಹೋಗುತ್ತದೆ. ಎಲ್ಲ ಹೊರಬೀಡಿನಲ್ಲಿ ರಾತ್ರಿ ಮೆರವಣಿಗೆಗಳು ಶ್ರೀ ದೇವಿಗೆ ಬಲಿ ತಂದ ನಂತರ ಮರಿಕ ದುರ್ಗೆ ದೇವಸ್ಥಾನಕ್ಕೆ ಹೋಗುವವು ಅಲ್ಲಿ ದೇವತೆಗಳಿಗೆ ಬಲಿ ಸಮರ್ಪಣೆಯಾದ ನಂತರ ಜಾತ್ರೆಯ ಗದ್ದುಗೆಗೆ ಹೋಗಿ ಅಲ್ಲಿ ಹೊರಬೀಡಿನಾಗುವಾಗ ಉತ್ಸವ ಮೂರ್ತಿ-ಯನ್ನು ಪಲ್ಲಕ್ಕಿಯನ್ನು ಇಟ್ಟು ಪೂಜಿಸುತ್ತಾರೆ. ಮಂಗಳವಾರದ ಹೊರಬೀಡು-ಗಳಲ್ಲಿ ಪಲ್ಲಕ್ಕಿಯು ಪೂರ್ವ ದಿಕ್ಕಿನ ಕೋಟೆಯ ಗದ್ದುಗೆಗೆ ಬರುತ್ತದೆ. ನಂತರ ಮೆರವಣಿಗೆಯು ಪುನಃ ಮರಿಕ ದುರ್ಗೆ ದೇವಸ್ಥಾನಕ್ಕೆ ಹೋಗಿ ಪೂಜೆ ಸಲ್ಲಿಸಿ ಮಾರಿಗುಡಿಗೆ ಹೋಗಿ ಪೂಜೆ ನೆರವೇರಿಸಿ ವಿಸರ್ಜನೆಯಾಗುತ್ತದೆ.

ಈ ಜಾತ್ರೆಯಲ್ಲಿ ಅಮ್ಮನವರು ಸವಾರಿ ಮಾಡುವ ರಥವನ್ನು ಕಟ್ಟುವುದು ತುಂಬಾ ವಿಶೇಷ. ನಾಲ್ಕನೆ ಹೊರಬೀಡಿನ ಮಾರನೆ ದಿನ ಮಂಗಳವಾದ್ಯದೊಂದಿಗೆ ಕಾಡಿಗೆ ಹೋಗಿ ಮೊದಲೆ ನಿಶ್ಚಯಿಸಿದ 'ತಾರಿ' ಮರವನ್ನು ಕಡಿಯುತ್ತಾರೆ. ನಂತರ ಐದನೇ ಹೊರಬೀಡಿನ ದಿನ ಮುಂಚಿನ ರಾತ್ರಿ ಮುಹೂರ್ತದ ಸಮಯದಲ್ಲಿ ಮಂಗಳವಾದ್ಯಗಳೊಂದಿಗೆ ಮೆರವಣಿಗೆಯ ಮುಖಾಂತರ ಮರವನ್ನು ತಂದು ದೇವಾಲಯದ ಎದುರು ಪೂಜೆ ಸಲ್ಲಿಸಲಾಗುತ್ತದೆ. ಜಾತ್ರೆ ಪ್ರಾರಂಭವಾಗುವ ಏಳು ದಿನಗಳ ಮೊದಲೇ ರಥ ಕಟ್ಟಲು ಪ್ರಾರಂಭಿಸುತ್ತಾರೆ. ಬಾಬುದಾರರು ಬಡಿಗರು ಆಚಾರಿಗಳು ಉತ್ಸಾಹದಿಂದ ರಥ ಕಟ್ಟುವ ಕೆಲಸ ಮಾಡುತ್ತಾರೆ.

ಹೊರಬೀಡಿನ ನಂತರ ಮಾರಿ ಕೋಣವನ್ನು ಮೆರವಣಿಗೆ ಮುಖಾಂತರ ಮಾರಿಕಾಂಬಾ ದೇವಸ್ಥಾನಕ್ಕೆ ಹೋಗಿ ಪೂಜೆ ಸಲ್ಲಿಸಿ. ನಂತರ ಅಲ್ಲಿಂದ ಗದ್ದುಗೆಯತ್ತ ಸಾಗುತ್ತದೆ ಅಲ್ಲಿ ಆಸಾದಿಯರು ಮತ್ತು ಮೆಸ್ತ್ರಿಯವರು ರಂಗಸ್ಥಾನ ನೆರವಣಿ ಹತ್ತಿರ ಕೋಣಕ್ಕೆ ಕಂಕಣ ಧಾರಣೆ ಮಾಡುತ್ತಾರೆ ಇದನ್ನು ಅಂಕೆ ಹಾಕುವುದು ಎನ್ನುತ್ತಾರೆ. ಅಂಕೆ ಹಾಕಿದ ದಿನ ಅಮ್ಮನವರ ವಿಗ್ರಹ ವಿಸರ್ಜನೆ ಮಾಡಿ ಬಣ್ಣಕ್ಕೆ ಕಳುಹಿಸುವ ಸಂಪ್ರದಾಯ ಇರುತ್ತದೆ.

ಜಾತ್ರೆಯ ಗದ್ದುಗೆಯಲ್ಲಿ ನಾಡಿಗ ಬಾಬುದಾರರಿಂದ ಮಂಗಳಾರತಿ ನಡೆಯುತ್ತದೆ. ಈ ಮಂಗಳಾರತಿಯಿಂದ ಒಂದು ವಿಶೇಷ ಹಣತೆ ಹಚ್ಚುತ್ತಾರೆ. ಈ ಹಣತೆಯನ್ನು ಜಾತ್ರೆ ಮುಗಿಯುವವರೆಗೆ ನಿರಂತರವಾಗ-ದಂತೆ ಕಾಯಬೇಕು ಮೇಟಿಯವರು ದೀಪ ಆರದಂತೆ ಕಾಯುವ ಕೆಲಸ ಮಾಡುತ್ತಾರೆ. ಇದನ್ನು ಮಂಟಪ ದೀಪ ಎನ್ನುತ್ತಾರೆ. ಅಂಕೆ ಹಾಕಿದ ನಂತರ ಬರುವ ಮೊದಲ ಮಂಗಳವಾರ ಶ್ರೀದೇವಿಗೆ ಕಲ್ಯಾಣ ಮಹೋತ್ಸವ ಮಾಡಲಾಗುತ್ತದೆ. ಅದೇ ದಿನ ರಥಕ್ಕೆ ಕಳಶಾರೋಹಣ ನೆರವೇರುತ್ತದೆ. ಶ್ರೀ ದೇವಿಯ ಮದುವೆಯ ಸಮಾರಂಭದಲ್ಲಿ ವಿಶೇಷವಾಗಿ ನಾಡಿಗರು ಬಾಬುದಾರರು ಊರು ಗಣ್ಯರು ಸಕಲ ಭಕ್ತಾದಿಗಳು ಪಾಲ್ಗೊಳ್ಳುತ್ತಾರೆ ಶ್ರೀದೇವಿಯು ಸಾಲಂಕಾರ ಭೂಷಿತಳಾಗಿ ರಾರಾಜಿಸುತ್ತಿರುತ್ತಾಳೆ.

ಶ್ರೀ ದೇವಿಯ ಮದುವೆಯ ಸಂಪ್ರದಾಯದಂತೆ ಶ್ರೀ ದೇವಿಗೆ ಮಂಗಳ ಸೂತ್ರ ಧಾರಣೆ, ಗುಡಿಗಾರರ ಪ್ರತಿಷ್ಠಾ ಪೂಜೆ, ನಾಡಿಗರ ಪೂಜೆ, ಚಕ್ರಸಾಲಿ ಪೂಜೆ, ಕೇದಾರಿ ಮನೆತನದ ಪೂಜೆ ಹಾಗು ಇತರ ಪೂಜೆಗಳು ನೆರವೇರುತ್ತವೆ. ಈ ಕಲ್ಯಾಣೋತ್ಸವದಲ್ಲಿ ಪೂರ್ವದ ಕಡೆಗಿನ ಜನರು ಹಾಗು ಬಯಲು ಸೀಮೆಯ ಲಂಬಾಣಿ ಜನಾಂಗದ ಜನರು ವಿಶೇಷವಾಗಿ ಮಹಿಳೆಯರು ತಮ್ಮ ಸಾಂಪ್ರದಾಯ ಉಡುಗೆ ಧರಿಸಿ ನೃತ್ಯ ಮಾಡುತ್ತಿರುವುದು ಮತ್ತು ಸಂಗೀತ ವಾದ್ಯಗಳನ್ನು ನುಡಿಸುತ್ತಿರುವುದು ಮದುವೆಯ ಸಂಭ್ರಮಕ್ಕೆ ಮತ್ತಷ್ಟು ಮೆರುಗು ತಂದು ಕೊಡುತ್ತದೆ.

ಬುಧವಾರ ಮುಂಜಾನೆ ಶ್ರೀದೇವಿಯನ್ನು ರಥದ ಮೇಲೆ ಪ್ರತಿಷ್ಠಾಪನೆ ಮಾಡುವ ಮೊದಲು ದೇವಾಲಯದ ಮುಂಭಾಗದ ಭೂ-ತಾಯಿಗೆ ಸಾತ್ವಿಕ ಬಲಿ ಸಮರ್ಪಣೆ ಮಾಡಲಾಗುತ್ತದೆ. ರಥೋತ್ಸವದೊಂದಿಗೆ ಶ್ರೀದೇವಿಯ ಶೋಭಾಯಾತ್ರೆ ಅದ್ದೂರಿಯಾಗಿ ಮಾರಿಗುಡಿಯಿಂದ ಊರ ಮಧ್ಯದ ಬಿಡಕಿ ಬೈಲಿನ ಜಾತ್ರಾ ಗದ್ದುಗೆಗೆ ಬಂದು ತಲುಪುತ್ತದೆ. ಶ್ರೀ ದೇವಿಯ ಶೋಭಾ-ಯಾತ್ರೆಯುದ್ದಕ್ಕೂ ಜೋಗತಿಯರು ನೃತ್ಯ ಮಾಡುತ್ತಿದ್ದರೆ ಅಸಾದಿಯರ ಕೋಲಾಟ, ಡೊಳ್ಳು ಕುಣಿತ, ಹಲಗೆ ಕಹಳೆಯ ನಿನಾದ ಝೇಂಕರಿಸುತ್ತಿರುತ್ತದೆ.

ಇತರ ಭಕ್ತರು ರಥಕ್ಕೆ ಬಾಳೆಹಣ್ಣನ್ನು ತೂರುತ್ತಿದ್ದರೆ ಇನ್ನೂ ಕೆಲ ಭಕ್ತರು ಹರಕೆಗಳ ಅಂದರೆ ಕೋಳಿಯನ್ನು ಹಾರಿ ಬಿಡುತ್ತಾರೆ. ಶೋಭಾಯಾತ್ರೆ ಮುಗಿದ ಮೇಲೆ ಅಮ್ಮನವರನ್ನು ಜಾತ್ರಾ ಗದ್ದುಗೆಯಲ್ಲಿ ಪ್ರತಿಷ್ಠಾಪನೆ ಮಾಡಲಾಗುತ್ತದೆ. ೮ ದಿನಗಳ ಕಾಲ ಜಗನ್ಮಾತೆ ಸಕಲ ಸಮಾಜ ಬಾಂಧವರ ಪೂಜಾ ಸೇವೆಗಾಗಿ ನಗರ ಮಧ್ಯಭಾಗದಲ್ಲಿನ ಗದ್ದುಗೆಯ ಮೇಲೆ ಕುಳಿತು ಜನರಿಗೆ



ದರ್ಶನ ಭಾಗ್ಯ ಕರುಣಿಸುತ್ತಾಳೆ. ಶ್ರೀ ದೇವಿಗೆ ಭಕ್ತರು ಸಲ್ಲಿಸಬೇಕಾದ ಸೇವೆಗಳೆಲ್ಲವು ಮರುದಿನ ಗುರುವಾರದಿಂದ ಪ್ರಾರಂಭವಾಗುತ್ತದೆ. 8 ದಿನಗಳ ಕಾಲ ಅದ್ದೂರಿಯಾಗಿ ನಡೆಯುವ ಜಾತ್ರೆಗೆ ಪ್ರತಿನಿತ್ಯವು ಲಕ್ಷಾಂತರ ಜನ ಬರುತ್ತಾರೆ.

ಜಾತ್ರೆ ಪ್ರಾರಂಭವಾದ 8 ದಿನಗಳ ನಂತರ ಬುಧ-ವಾರ ಜಾತ್ರಾ ವಿಸರ್ಜನಾ ವಿಧಿವಿಧಾನಗಳು ನೆರವೇರುತ್ತವೆ ನಾಡಿಗ ಬುಧವಾರದಿಂದ ಕೊನೆಯ ಮಂಗಳಾರತಿ, ಶ್ರೀದೇವಿಯನ್ನು ಗದ್ದುಗೆಯಿಂದ ಕೊನೆಯ ಮಂಗಳಾರತಿ, ಶ್ರೀ ದೇವಿಯನ್ನು ಗದ್ದುಗೆಯಿಂದ ಇಳಿಸಿ ಮಂಟಪದ ಮಧ್ಯಭಾಗದಲ್ಲಿ ಕೂರಿಸಿದಾಗ ಅಸಾದಿಯವರು ಹೊಲಸು ಪ್ರಸಾದವನ್ನು ಪ್ರಾಚೀನ ರೈತರಿಗೆ ವಿತರಿಸುತ್ತಾರೆ ರೈತರು ಅದನ್ನು ತಮ್ಮ ಹೊಲದಲ್ಲಿ ಚೆಲ್ಲುತ್ತಾರೆ. ಶ್ರೀ ದೇವಿಯು ಜಾತ್ರೆಯ ಮಂಟಪದಿಂದ ರಥದಲ್ಲಿ ಮರಳುವುದಿಲ್ಲ ಬದಲಾಗಿ

ವಿಶೇಷವಾಗಿ ಸಿದ್ಧಗೊಳ್ಳಿಸಿದ ಅಟ್ಟಲಿನಲ್ಲಿ ಎಳೆಯುತ್ತಾರೆ ಜಾತ್ರೆ ಕೊನೆಯ ದಿವಸಗಳಲ್ಲಿ ಮಾತಂಗಿ ಚಪ್ಪರ ಸುಡುವುದು ಒಂದು. ಬೇವಿ ಗದ್ದುಗೆಯಿಂದ ಮೆರವಣಿಗೆಯಲ್ಲಿ ಹೋಗುವಾಗ ದೃಷ್ಟಿ ಸಂಹಾರ ಸಂಕೇತವಾಗಿ ಮಾತಂಗಿ ಚಪ್ಪರ ಸುಡುತ್ತಾರೆ. ಜಾತ್ರೆಯ ಕಟ್ಟಕಡೆಯ ದಿವಸ ಪ್ರಾತಃ ದೇವಿಯ ಗದ್ದುಗೆ ಗದ್ದುಗೆಗೆ ಹೋಗಿ ಯುಕ್ತವಾದ ವಿಧಿ ನೆರವೇರಿಸಲಾಗುತ್ತದೆ ಅಲ್ಲಿ ದೇವಿಯ ಮೂರ್ತಿಯನ್ನು ವಿಸರ್ಜಿಸಲಾಗುತ್ತದೆ. ಹೀಗೆ ಜಾತ್ರೆ ಸಂಪನ್ನಗೊಳ್ಳುತ್ತದೆ.

ಈ ಜಾತ್ರೆಯಲ್ಲಿ ಜನರಿಗೆ ಮನರಂಜನೆಗೇನು ಕೊರತೆ ಇಲ್ಲ. ಮಕ್ಕಳು ಯುವಕರಿಂದ ಹಿಡಿದು ವೃದ್ಧರಿಗೆಲ್ಲರಿಗು ಇಲ್ಲಿ ಮನರಂಜನೆಯ ಮಹಾಪೂರವೆ ಇರುತ್ತದೆ. ಕಲಾಸಕ್ತರಿಗೆ ವಿವಿಧ ನಾಟಕ ಕಂಪನಿಗಳಿಂದ ನಾಟಕ, ಯಕ್ಷಗಾನ, ಸರ್ಕಸ್ಸುಗಳು ಇರುತ್ತವೆ. ತೈತ್ತಾ ತೊಟ್ಟಿಲು ಜೋಕಾಲಿಗಳು ಮತ್ತು ವಿವಿಧ ಆಟಿಕೆಗಳು, ಜಾದೂ ಚಮತ್ಕಾರಗಳು, ಶ್ವಾನ ಪ್ರದರ್ಶನ, ಪುಸ್ತಕ ಪ್ರಿಯರಿಗೆ ಪುಸ್ತಕ ಪ್ರದರ್ಶನ. ಕೆರೆಯಲ್ಲಿ ಬೋಟಿಂಗ್, ತಿಂಡಿ ಪ್ರಿಯರಿಗೆ ವಿವಿಧ ಬಗೆಯ ತಿನಿಸುಗಳು, ಮಹಿಳೆಯರ ಪ್ರಿಯ ಸೌಂದರ್ಯ ವರ್ಧಕ ಆಭರಣ ಬಳೆಗಳ ಮಳಿಗೆಗಳು, ಬಟ್ಟೆ ಬರೆ ಮತ್ತಿತರ ಆಟಿಕೆಗಳ ಮಳಿಗೆಗಳು, ಮಹಿಳೆಯರಿಗೆ ಗೃಹೋಪಯೋಗಿ ಮಳಿಗೆಗಳು ಹೀಗೆ ಹಲವು ರೀತಿಯ ಮನರಂಜನೆ ಈ ಜಾತ್ರೆಯಲ್ಲಿ ಇರುತ್ತದೆ.

ವಿಶೇಷವಾಗಿ ಈ ಜಾತ್ರೆಯಲ್ಲಿ ಎಲ್ಲೂ ಪ್ರಾಣಿ ಹಿಂಸೆ ಇಲ್ಲ ಬಹುಶ: ಒಂದು ಗ್ರಾಮ ದೇವತೆ ಈಗ ಇಡಿ ನಾಡಿಗೆ ಅಧಿದೇವತೆ ಆಗಿರುವುದನ್ನ ನಾವು ಶಿರಸಿಯಲ್ಲಿ ಮಾತ್ರ ಕಾಣಬಹುದು.



ಶಿರಸಿಗೆ ಪರ ಊರಿನಿಂದ ಬರುವ ಭಕ್ತಾದಿಗಳಿಗೆ ಕರ್ನಾಟಕ ರಾಜ್ಯ ಸಾರಿಗೆಯು ಸಂಸ್ಥೆಯು ಕರ್ನಾಟಕದ ಎಲ್ಲ ಜಿಲ್ಲೆಗಳಿಂದ ಹೆಚ್ಚಿನ ಬಸ್ ಕಲ್ಪಿಸಿರುತ್ತವೆ. ಬಂದ ಭಕ್ತಾದಿಗಳಿಗೆ ದೇವಸ್ಥಾನದಲ್ಲಿ ಊಟದ ವ್ಯವಸ್ಥೆ ಇರುತ್ತದೆ. ಮತ್ತು ನಗರದ ಅಲ್ಲಲ್ಲಿ ಭಕ್ತರಿಂದ ಉಚಿತ ಮಜ್ಜಿಗೆ ಪಾನಕಗಳು ಮತ್ತು ದಾಸೋಹ ಸೇವೆಗಳು ಇರುತ್ತವೆ.